# ಕರ್ನಾಟಕ ವಿಧಾನಸಭೆ

## ಹದಿನಾಲ್ಕನೇ ವಿಧಾನಸಭೆ

## ಹನ್ನೆರಡನೇ ಅಧಿವೇಶನ

## **ಕಾರ್ಯಕಲಾಪಗಳ ಪಟ್ಟಿ**

ಬುಧವಾರ, ದಿನಾಂಕ 30ನೇ ನವೆಂಬರ್, 2016

(ಸಮಯ ಬೆಳಗ್ಗೆ : 11.00 ಗಂಟೆ)

----

### 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) (i) ದಿನಾಂಕ: 23.11.2016ರ 3ನೇ ಪಟ್ಟಿಯಿಂದ ತಡೆಹಿಡಿಯಲಾದ ಡಾ॥ ಎ.ಬಿ. ಮಾಲಕರೆಡ್ಡಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:33(634) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

(ii) ದಿನಾಂಕ: 23.11.2016ರ 3ನೇ ಪಟ್ಟಿಯಿಂದ ತಡೆಹಿಡಿಯಲಾದ ಡಾ॥ ಸುಧಾಕರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:44(677) : ಮಾನ್ಯ ಗಣಿ ಮತ್ತು ಭೂ-ವಿಜ್ಞಾನ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

### 2. ವರದಿಗಳನ್ನೊಪ್ಪಿಸುವುದು

1. **ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು** – 2016-17ನೇ ಸಾಲಿನ ಅರ್ಜಿಗಳ ಸಮಿತಿಯ 22ನೇ ವರದಿಯನ್ನೊಪ್ಪಿಸುವುದು.
2. **ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು**–2016-17ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ 6ನೇ ವರದಿಯನ್ನೊಪ್ಪಿಸುವುದು.

### 3. ಮಹದಾಯಿ ಕಳಸಾ ಬಂಡೂರಿ ನಾಲಾ ಯೋಜನೆ ಕುರಿತು ಮುಂದುವರೆದ ವಿಶೇಷ ಚರ್ಚೆ ಹಾಗೂ ಸರ್ಕಾರದ ಉತ್ತರ

....2

## 4. ಶಾಸನ ರಚನೆ

## I. ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-**
   - ಅ) 2016ನೇ ಸಾಲಿನ ಕರ್ನಾಟಕ ಜೀವರಕ್ಷಕ ಮತ್ತು ವೈದ್ಯಕೀಯ ವೃತ್ತಿನಿರತರ (ತುರ್ತು ಸನ್ನಿವೇಶಗಳಲ್ಲಿ ರಕ್ಷಣೆ ಮತ್ತು ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.
   - ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2, **ಶ್ರೀ ಕಾಗೋಡು ತಿಮ್ಮಪ್ಪ (ಮಾನ್ಯ ಕಂದಾಯ ಸಚಿವರು) ಅವರು:-**
   - ಅ) 2016ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.
   - ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. **ಶ್ರೀ ಹೆಚ್.ವೈ. ಮೇಟಿ (ಮಾನ್ಯ ಅಬಕಾರಿ ಸಚಿವರು) ಅವರು:-**
   - ಅ) 2016ನೇ ಸಾಲಿನ ಕರ್ನಾಟಕ ಅಬಕಾರಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.
   - ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## II. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**ಶ್ರೀ ಕೆ.ಆರ್. ರಮೇಶ್ ಕುಮಾರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)ಅವರು:-**
- ಅ) 2016ನೇ ಸಾಲಿನ ಕರ್ನಾಟಕ ಆಯುರ್ವೇದ, ಪ್ರಕೃತಿ ಚಿಕಿತ್ಸೆ, ಸಿದ್ಧ, ಯುನಾನಿ ಮತ್ತು ಯೋಗ ವೈದ್ಯ ವೃತ್ತಿ ನಿರತರ ನೋಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
- ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

....3

## 5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಆರ್. ಅಶೋಕ, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್. ಸುರೇಶ್ ಕುಮಾರ್ ಮತ್ತು ಇತರರು –** ಹೈದರಾಬಾದ್ – ಕರ್ನಾಟಕ ಸಮಗ್ರ ಅಭಿವೃದ್ಧಿಗಾಗಿ ಭಾರತ ಸಂವಿಧಾನದ ಅನುಚ್ಛೇದ 371 (ಜೆ)ಗೆ ತಿದ್ದುಪಡಿ ತಂದು ವಿಶೇಷ ಸ್ಥಾನಮಾನ ನೀಡಿದ್ದರೂ ಸಹ, ಅಲ್ಲಿನ ಜನರಿಗೆ ಅಗತ್ಯ ಸೌಲಭ್ಯ ಸಿಗದಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. **ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ, ವೈ.ಎಸ್.ವಿ.ದತ್ತಾ, ಕೆ.ಎಂ. ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಎಸ್.ಆರ್. ಶ್ರೀನಿವಾಸ್ ಮತ್ತು ಇತರರು –** ರಾಜ್ಯದಲ್ಲಿ ಕೊಬ್ಬರಿ ಮತ್ತು ತೆಂಗಿನಕಾಯಿ ಬೆಳೆಯ ದರಗಳು ಕನಿಷ್ಟ ಮಟ್ಟಕ್ಕೆ ಕುಸಿದಿರುವುದರಿಂದ ತೆಂಗು ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟದಲ್ಲಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಜೆ.ಆರ್. ಲೋಬೋ, ಅರಬೈಲ್ ಶಿವರಾಂ ಹೆಬ್ಬಾರ್, ಬಿ.ಎ. ಮೊಹಿದೀನ ಬಾವ, ಕೆ. ಅಭಯ ಚಂದ್ರ ಮತ್ತು ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರುಗಳು –** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಮಟ್ಟದಲ್ಲಿ ನಮೂನೆ 9 & 11ನ್ನು ನೀಡುವ ಕುರಿತು ಜನ ಸಾಮಾನ್ಯರು ಅನುಭವಿಸುವ ಬವಣೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4. **ಶ್ರೀಯುತರುಗಳಾದ ಡಾ||ಕೆ. ಸುಧಾಕರ್, ಕ್ಯಾತಸಂದ್ರ ಎನ್. ರಾಜಣ್ಣ, ಕೆ. ಷಡಕ್ಷರಿ, ಆರ್. ನರೇಂದ್ರ ಹಾಗೂ ಇತರರು –** ಇತ್ತೀಚೆಗೆ ರೂ. 500/– ಮತ್ತು ರೂ. 1000/– ನೋಟುಗಳನ್ನು ರದ್ದುಪಡಿಸಿರುವುದರಿಂದ ರಾಜ್ಯದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಕಾರ್ಯಗಳು ಸ್ಥಗಿತಗೊಂಡಿದ್ದು, ಇದರಿಂದ ರೈತರ ಸಾಲ ಮರುಪಾವತಿ ಹಾಗೂ ಖಾತೆಯಿಂದ ಹಣವನ್ನು ಪಡೆಯಲು, ಹಾಲು ಉತ್ಪಾದಕರಿಗೆ ಹಣ ಬಟವಾಡೆ ಮಾಡಲು ಹಾಗೂ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಹಣ ವಿತರಣೆಗೆ ತೊಂದರೆ ಉಂಟಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. **ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಜಾರಕಿಹೊಳಿ ಸತೀಶ್ ಲಕ್ಷ್ಮಣರಾವ್ ಮತ್ತು ಕ್ಯಾತಸಂದ್ರ ಎನ್. ರಾಜಣ್ಣ ಅವರುಗಳು –** ಖ್ಯಾತ ಸಾಹಿತಿ ಹಾಗೂ ಸಂಶೋಧಕರಾಗಿದ್ದ ಎಂ.ಎಂ. ಕಲಬುರಗಿ ಅವರ ಹತ್ಯೆ ನಡೆದು ಒಂದು ವರ್ಷ ಕಳೆದರೂ ಇಲ್ಲಿಯವರೆಗೆ ಹಂತಕರನ್ನು ಹಿಡಿಯಲು ವಿಳಂಬವಾಗಿರುವ ಹಾಗೂ ಪ್ರಕರಣದ ತನಿಖೆಯ ಬೆಳವಣಿಗೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

6. **ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಪಿ. ರಾಜೀವ್ ಮತ್ತು ಬಿ.ಆರ್. ಪಾಟೀಲ್ ಅವರುಗಳು** – ರೈತರು ಬೆಳೆದ ಕಬ್ಬಿಗೆ ಹಳೆ ಬಾಕಿ ಹಣವನ್ನು ಪಾವತಿಸದೇ ಇರುವುದು, ಈ ಸಾಲಿನ ಕಬ್ಬಿನ ಬೆಲೆ ನಿಗದಿ ಮಾಡದೇ ಮತ್ತು ಯಾವುದೇ ಸಭೆಯನ್ನೂ ಸಹ ಕರೆಯದಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಸಂಜಯ್ ಬಿ. ಪಾಟೀಲ್, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು** – ಕೊಪ್ಪಳ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಸದೇ ಬಿಲ್ಲುಗಳನ್ನು ಪಾವತಿಸಿ ಸರ್ಕಾರಕ್ಕೆ ಅರ್ಥಿಕ ನಷ್ಟ ಉಂಟು ಮಾಡಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

## 6. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಅರಸೀಕೆರೆ ತಾಲ್ಲೂಕು, ಹಬ್ಬನಘಟ್ಟ ಗ್ರಾಮದ ಸರ್ಕಾರಿ ನ್ಯಾಯ ಬೆಲೆ ಅಂಗಡಿಯಲ್ಲಿ ಪಡಿತರ ವಿತರಣೆಯಲ್ಲಿ ವಿಳಂಬ ಹಾಗೂ ಅನ್ಯಾಯ ಉಂಟು ಮಾಡುತ್ತಿರುವ ಬಗ್ಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

2. **ಶ್ರೀ ಭೂಸನೂರ ರಮೇಶ್ ಬಾಳಪ್ಪ ಅವರು** – ಅತ್ಯಂತ ಹಿಂದುಳಿದ ನಾವಿ (ಹಡಪದ) ಜನಾಂಗವನ್ನು ಹಿಂದುಳಿದ ವರ್ಗದ ಪ್ರವರ್ಗ–1ಕ್ಕೆ ಸೇರ್ಪಡೆಗೊಳಿಸುವ ಬಗ್ಗೆ' ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. **ಶ್ರೀ ಕೆ.ಜಿ. ಬೋಪಯ್ಯ ಅವರು** – ರಾಜ್ಯದಲ್ಲಿ ಗ್ರಾಮೀಣ ಕಡ್ಡಾಯ ವೈದ್ಯಕೀಯ ಸೇವಾ ಮತ್ತು ತರಬೇತಿ ಕಾಯ್ದೆಗೆ ನ್ಯಾಯಾಲಯ ನೀಡಿರುವ ತಡೆಯಾಜ್ಞೆಯನ್ನು ತೆರವುಗೊಳಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

...5

4. **ಶ್ರೀ ಸಿದ್ದು ಬಿ. ನ್ಯಾಮಗೌಡ ಅವರು** – ಜಮಖಂಡಿ ತಾಲ್ಲೂಕಿನಲ್ಲಿ ಸ್ಥಗಿತಗೊಂಡಿರುವ ಎಕ್ಕಲಮಡ್ಡಿ ಏತ ನೀರಾವರಿ ಯೋಜನೆಯನ್ನು ಪುನರಾರಂಭಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

5. **ಶ್ರೀ ಎಂ.ಕೃಷ್ಣಪ್ಪ (ಬೆಂಗಳೂರು ದಕ್ಷಿಣ) ಅವರು** – ಬನ್ನೇರುಘಟ್ಟ, ಮಂಟಪ, ಹಾರಗದ್ದೆ, ಕಲ್ಲುಬಾಳು ಪಂಚಾಯ್ತಿ ಮತ್ತು ಜಿಗಣಿ ಪುರಸಭೆಗಳ ಓವರ್ ಹೆಡ್ ಟ್ಯಾಂಕ್‌ಗಳಿಗೆ ಕಾವೇರಿ ನೀರು ಸರಬರಾಜು ಮಾಡುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

6. **ಶ್ರೀ ಎಸ್.ಆರ್. ವಿಶ್ವನಾಥ್ ಅವರು** – ರಾಜ್ಯದಲ್ಲಿ 43 ಹೊಸ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7. **ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು** – ಸ್ಥಗಿತಗೊಂಡಿರುವ ತರೀಕೆರೆ ಪಟ್ಟಣದ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

8. **ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು** – ತರೀಕೆರೆ ಧರ್ಮಾಪುರ ರಸ್ತೆ ಹಾಗೂ ಶಿವನಿ-ದಾಸರ ಹಟ್ಟಿ ರಸ್ತೆ ಕಾಮಗಾರಿಯನ್ನು ಪ್ರಾರಂಭಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

9. **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಸಕಲೇಶಪುರ ತಾಲ್ಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10. **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಶ್ರವಣಬೆಳಗೊಳದ ಸುತ್ತಲೂ ಇರುವ ಹೊಸಹಳ್ಳಿ, ಉತ್ತೇನಹಳ್ಳಿ ಮತ್ತು ಮಂಚಿಕಟ್ಟೆ ಕೆರೆಗಳನ್ನು ಹಾಗೂ ಶ್ರವಣಬೆಳಗೊಳದ ಮಧ್ಯೆ ಇರುವ 3 ಕಟ್ಟೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

....6

11. **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯ ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

12. **ಶ್ರೀ ಡಿ.ಎನ್. ಜೀವರಾಜ್ ಅವರು** – ರಾಜ್ಯದಲ್ಲಿ ನಿಯಮಬಾಹಿರವಾಗಿ ಮದ್ಯ ಮಾರಾಟ ಮಳಿಗೆಗಳನ್ನು ತೆರೆಯುತ್ತಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯುವುದು.

13. **ಶ್ರೀ ವೈ.ಎ. ನಾರಾಯಣಸ್ವಾಮಿ ಅವರು** – ಹೆಬ್ಬಾಳ ವಿಧಾನ ಸಭಾ ಕ್ಷೇತ್ರದಲ್ಲಿನ ವಾರ್ಡ್ ನಂ.21, 22 ಮತ್ತು 23 ರಲ್ಲಿ ಸಮರ್ಪಕ ಸಾರಿಗೆ ವ್ಯವಸ್ಥೆ ಇಲ್ಲದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

14. **ಶ್ರೀ ಎಂ.ಟಿ. ಕೃಷ್ಣಪ್ಪ ಅವರು** – ತುರುವೇಕೆರೆ ತಾಲ್ಲೂಕಿನಲ್ಲಿ ನಿರ್ಮಿತಿ ಕೇಂದ್ರಕ್ಕೆ ವಹಿಸಲಾಗಿರುವ ಹಿಂದುಳಿದ ವರ್ಗದ ಹಾಸ್ಟೆಲ್ ಕಟ್ಟಡ ಕಾಮಗಾರಿ ಪೂರ್ಣಗೊಳ್ಳದೇ, ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

15. **ಶ್ರೀ ಪ್ರಭು ಬಿ. ಚವ್ಹಾಣ ಅವರು** – ಮರಾಠ ಜನಾಂಗವನ್ನು ಹಿಂದುಳಿದ ಪ್ರವರ್ಗ-2ಎ ಗೆ ಸೇರಿಸಿ ಮೀಸಲಾತಿ ಕಲ್ಪಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

16. **ಶ್ರೀ ಗುರುಪಾಟೀಲ್ ಶಿರವಾಳ ಅವರು** – ಕೆಲವೊಂದು ಫ್ರಾಂಚೈಸಿಗಳ ಮೂಲಕ ಪಡಿತರ ಕಾರ್ಡ್‌ದಾರರಿಗೆ ಕೂಪನ್‌ಗಳನ್ನು ವಿತರಣೆ ಮಾಡುತ್ತಿರುವುದರಲ್ಲಿ ತೊಂದರೆಯಾಗುತ್ತಿರುವುದರಿಂದ ಕೂಪನ್ ವ್ಯವಸ್ಥೆಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

17. **ಶ್ರೀ ಗೋವಿಂದ ಎಂ. ಕಾರಜೋಳ ಮತ್ತು ಶ್ರೀ ಸಿ.ಟಿ ರವಿ ಅವರುಗಳು** – ಜಮಖಂಡಿಯಿಂದ ಅಥಣಿ ತಾಲ್ಲೂಕಿನ ತೆಲಸಂಗ ಕ್ರಾಸ್‌ವರೆಗಿನ ರಸ್ತೆಯನ್ನು ಅಗಲೀಕರಣಗೊಳಿಸುವುದಲ್ಲದೇ, ರಾಜ್ಯ ಹೆದ್ದಾರಿ ರಸ್ತೆಯನ್ನಾಗಿ ಉನ್ನತೀಕರಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

....7

18. **ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು** – ಗ್ರಾಮೀಣ ಕ್ರೀಡಾ ಕೂಟಗಳನ್ನು ಆಯೋಜಿಸುವ ಬಗ್ಗೆ ಮಾನ್ಯ ಮೀನುಗಾರಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

19. **ಶ್ರೀ ಪಿ. ರಾಜೀವ್ ಅವರು** – ಬಿ.ಪಿ.ಎಲ್ ಪಡಿತರದಾರರು ಸಾಮಾಜಿಕ ಭದ್ರತಾ ಯೋಜನೆಗಳಿಗೆ ಅರ್ಹರಾಗುವಂತೆ ನಿಯಮಾವಳಿಗಳನ್ನು ಮಾರ್ಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

20. **ಶ್ರೀ ವೈ.ಎ. ನಾರಾಯಣಸ್ವಾಮಿ ಅವರು** – ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ತಳಮಟ್ಟದ ನೀರು ಶೇಖರಣಾ ಘಟಕವನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

21. **ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು** – ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಮತ್ತು ರೈತರ ಪಂಪುಸೆಟ್‌ಗಳಿಗೆ ವೋಲ್ಟೇಜ್ ಸಮಸ್ಯೆಗಳನ್ನು ಬಗೆಹರಿಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

22. **ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು** – ಕಾವೇರಿ ಹಾಗೂ ಮಹದಾಯಿ ನದಿ ನೀರಿನ ಹಂಚಿಕೆಯ ವಿಚಾರದಲ್ಲಿ ಹೋರಾಟ ನಡೆಸುತ್ತಿದ್ದ ರೈತರು ಮತ್ತು ಹೋರಾಟಗಾರರ ವಿರುದ್ಧ ದಾಖಲಿಸಿರುವ ಮೊಕದ್ದಮೆಗಳನ್ನು ಹಿಂತೆಗೆದುಕೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

23. **ಶ್ರೀ ಎಂ. ರಾಜಣ್ಣ ಅವರು** – ಶಿಡ್ಲಘಟ್ಟ ಪಟ್ಟಣದಲ್ಲಿ ಗ್ಯಾಂಗ್‌ವಾರುಗಳು ನಡೆಯುತ್ತಿರುವುದರಿಂದ ಅಲ್ಲಿನ ಶಾಂತಿ ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

24. **ಶ್ರೀ ಎಂ.ಟಿ. ಕೃಷ್ಣಪ್ಪ ಅವರು** – ತುರುವೇಕೆರೆ ತಾಲ್ಲೂಕು ಸರ್ಕಾರಿ ಪಾಲಿಟೆಕ್ನಿಕ್ ಹಾಸ್ಟೆಲ್ ಕಟ್ಟಡ ನಿರ್ಮಾಣ ಕಾಮಗಾರಿಯು ಪೂರ್ಣಗೊಳ್ಳದೇ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

25. **ಶ್ರೀ ಬಿ.ಬಿ. ನಿಂಗಯ್ಯ ಅವರು** – ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಹಲವಾರು ಗ್ರಾಮಗಳಲ್ಲಿ ಕಾಡಾನೆಗಳ ಹಾವಳಿಯಿಂದ ನಷ್ಟ ಹೊಂದಿರುವ ರೈತರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಗಮನ ಸೆಳೆಯುವುದು.

....8

26. **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ಚಿಂತಾಮಣಿ ತಾಲ್ಲೂಕಿನಲ್ಲಿ ಟಿಪ್ಪು ಜಯಂತಿಯಲ್ಲಿ ಭಾಗವಹಿಸಿದ ಮುಸ್ಲಿಂ ಯುವಕರಿಗೆ ಪೋಲೀಸರು ಕಿರುಕುಳ ನೀಡುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

27. **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ಚಿಂತಾಮಣಿ ತಾಲ್ಲೂಕಿನಲ್ಲಿ ಪಹಣಿ ತಿದ್ದುಪಡಿ ಪ್ರಕರಣಗಳನ್ನು ವಿಲೇ ಮಾಡದೇ ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

28. **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆ, ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನಲ್ಲಿ ಆನೆ ದಾಳಿಗೊಳಗಾದವರಿಗೆ ಪರಿಹಾರ ನೀಡುವ ಮತ್ತು ಆನೆ ಕಾರಿಡಾರ್ ಸ್ಥಾಪನೆ ವಿಳಂಬವಾಗಿರುವ ಬಗ್ಗೆ ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಗಮನ ಸೆಳೆಯುವುದು.

29. **ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ಅವರು** – ವೈದ್ಯಕೀಯ / ಮಾನವೀಯ ಆಧಾರದ ಮೇಲೆ ವಿಜಯಪುರ ಕಾರಾಗೃಹದಲ್ಲಿರುವ ಖೈದಿಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

30. **ಶ್ರೀ ಜೆ.ಆರ್. ಲೋಬೋ ಅವರು** – ಮಂಗಳೂರು ನಗರಕ್ಕೆ ಕುಡಿಯುವ ನೀರು ಯೋಜನೆಯಡಿಯಲ್ಲಿ ತುಂಬೆ ಅಣೆಕಟ್ಟು ನೀರಿನ ಮಟ್ಟವನ್ನು ಏರಿಸಿ ನೀರನ್ನು ಶೇಖರಿಸುವ ಸಂಬಂಧದಲ್ಲಿ ಅಗತ್ಯ ಜಮೀನು ಸ್ವಾಧೀನ ಪ್ರಕಿಯೆ ಕ್ರಮಕೈಗೊಳ್ಳುವ ಬಗ್ಗೆ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

31. **ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು** – ಕೊರಟಗೆರೆಯ ನಾಗೇನಹಳ್ಳಿ ಹತ್ತಿರ ರೈಲ್ವೆ ನಿಲ್ದಾಣಕ್ಕಾಗಿ ರೈತರ ಜಮೀನು ಸ್ವಾಧೀನಪಡಿಸಿಕೊಳ್ಳುವುದನ್ನು ಕೈಬಿಟ್ಟು ಅಭಿವೃದ್ಧಿಪಡಿಸದೇ ಖಾಲಿಯಿರುವ ಕೆ.ಐ.ಎ.ಡಿ.ಬಿ.ಯ ಜಾಗದಲ್ಲಿ ರೈಲ್ವೆ ನಿಲ್ದಾಣ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

32. **ಶ್ರೀ ಬಸವರಾಜ್ ನೀಲಪ್ಪ ಶಿವಣ್ಣನವರ್ ಅವರು** – ಉತ್ತರ ಕರ್ನಾಟಕದ ಹಾವೇರಿ ಸಕ್ಕರೆ ಕಾರ್ಖಾನೆಯನ್ನು ದಕ್ಷಿಣ ಕರ್ನಾಟಕಕ್ಕೆ ಸೇರಿಸಿರುವುದರಿಂದ ಕಬ್ಬು ಇಳುವರಿ ದರದಲ್ಲಿ ವ್ಯತ್ಯಾಸವಿರುವ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲಾ ರೈತರಿಗೆ ಅನ್ಯಾಯವಾಗುತ್ತಿರುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

....9

೩೩. **ಶ್ರೀಮತಿ ಶಾರದಾ ಪೂರ್ಯಾ ನಾಯಕ್ ಅವರು** – ದಿನಾಂಕ: 04.02.2015 ರಂದು ಹೊರಡಿಸಲಾಗಿರುವ ರಾಜ್ಯ ಪತ್ರದಲ್ಲಿ ಹಲವಾರು ಗ್ರಾಮಗಳು ಸೋಗಾನೆ ಗ್ರಾಮ ಪಂಚಾಯ್ತಿಗೆ ಸೇರ್ಪಡೆಯಾಗದಿರುವುದರಿಂದ, ಹಲವಾರು ಯೋಜನೆಯ ಕಾಮಗಾರಿಗಳು ಅನುಷ್ಠಾನಗೊಳಿಸಲು ಸಾಧ್ಯವಾಗದೇ ಇದ್ದು, ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

34. **ಶ್ರೀ ಎನ್.ಹೆಚ್. ಕೋನರಡ್ಡಿ ಅವರು** – ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ಸಾರ್ವಜನಿಕ ಉದ್ಯಮಗಳ ರಾಜ್ಯ ಸಚಿವರ ಗಮನ ಸೆಳೆಯುವುದು.

೩೫. **ಶ್ರೀ ವಿಶ್ವನಾಥ್ ಈ ಪಾಟೀಲ್ ಅವರು** – ಬೆಳಗಾವಿಯ ಮಾಹೇಶ್ವರಿ ಅಂಧ ಮಕ್ಕಳ ಶಾಲೆಗೆ ಬಾಕಿ ಇರುವ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

36. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ, ಹಾಸನ ತಾಲ್ಲೂಕು, ಶಾಂತಿಗ್ರಾಮ ಮತ್ತು ದುದ್ದ ಹೋಬಳಿಗಳ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆ ಅನುಷ್ಠಾನಗೊಳಿಸುವುದು ಹಾಗೂ ಚನ್ನರಾಯಪಟ್ಟಣ ಮತ್ತು ಹೊಳೇನರಸೀಪುರ ತಾಲ್ಲೂಕಿನ ಹಲವಾರು ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

**ಎಸ್.ಮೂರ್ತಿ**
**ಕಾರ್ಯದರ್ಶಿ (I/C)**

---

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm